ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	516 (606)
ಸದಸ್ಯರ ಹೆಸರು	:	ಶ್ರೀ ಹೆಚ್.ಎಂ.ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	21.02.2022
ಉತ್ತರಿಸುವವರು	:	ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಆನೆಗಳ ಹಾವಳಿ ಹೆಚ್ಚಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಆನೆಗಳ ಹಾವಳಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು);	ಕಾಡಾನೆ ಹಾವಳಿ ತಡೆಗಟ್ಟಲು ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. 1. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ. 2. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. 3. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು/ ಮಾಡಲಾಗುತ್ತಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ / ಕೈಗೊಳ್ಳಲಾಗುತ್ತಿದೆ 4. ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (Rapid Reaction Teams) ರಚಿಸಿ ನಿರ್ವಹಿಸಲಾಗುತ್ತಿದೆ.

ಕ್ರ. ಸಂ.	ಪ್ರಶ್ನೆ	ಉತ್ತರ
		5. ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. 6. ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ. 7. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯ ನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. 8. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ಪ್ರಕರಣಗಳನ್ನು ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ. 9. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆ ಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. 10. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಹಾನಿ ಪ್ರಕರಣಗಳಲ್ಲಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ-ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆದ್ಯತೆ ಮೇರೆಗೆ ಸರ್ಕಾರದ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ಥರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ಇ-ಪರಿಹಾರ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.
ಆ)	ಆನೆ ದಾಳಿಗೊಳಗಾದ ಕುಟುಂಬಗಳಿಗೆ ಕಳೆದ 5 ವರ್ಷಗಳಲ್ಲಿ ಸರ್ಕಾರ ನೀಡಿರುವ ಪರಿಹಾರವೆಷ್ಟು; ಇಲ್ಲಿಯವರೆಗೂ ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ; (ಫಲಾನುಭವಿಯ ಹೆಸರು ಮತ್ತು ಗ್ರಾಮದ ವಿವರ ನೀಡುವುದು);	ಕಳೆದ 5 ವರ್ಷಗಳಲ್ಲಿ ಕಾಡಾನೆ ದಾಳಿಯಿಂದ ಉಂಟಾದ ಮಾನವ-ಪ್ರಾಣ ಹಾನಿ, ಮಾನವ ಗಾಯ ಪ್ರಕರಣಗಳ ಹಾಗೂ ಪಾವತಿಸಿದ ದಯಾತ್ಮಕ ಧನದ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

......3

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ)</td><td>ಪರಿಹಾರ ನೀಡದೇ ಬಾಕಿ ಉಳಿದಿರುವ ಕುಟುಂಬಗಳೆಷ್ಟು; ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು ;</td><td rowspan="2">ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಹಾನಿ ಪ್ರಕರಣಗಳಲ್ಲಿ ಬಿಡುಗಡೆಯಾಗುವ ಅನುದಾನದ ಮಿತಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 66 ಎಫ್ ಡಬ್ಲ್ಯುಎಲ್ 2019, ದಿನಾಂಕ 07/1/2020 ರನ್ವಯ ರೂ.7.50 ಲಕ್ಷಗಳ ದಯಾತ್ಮಕ ಧನವನ್ನು ನಿಯಮಾನುಸಾರ ಪರಿಶೀಲಿಸಿ ಪಾವತಿಸಲು ಅವಕಾಶವಿದ್ದು, ಅದರಂತೆ ಘಟನೆ ನಡೆದ ಕೂಡಲೇ ರೂ.2.00 ಲಕ್ಷಗಳನ್ನು ಮೃತರ ವಾರಸುದಾರರಿಗೆ ಪಾವತಿಸಲಾಗುತ್ತಿದೆ. ಉಳಿದ ಮೊತ್ತ ರೂ.5.50 ಲಕ್ಷಗಳನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಹಂತದಲ್ಲಿ ವಿಚಾರಣೆ ನಡೆಸಿ, ಅಗತ್ಯವಿರುವ ಎಲ್ಲಾ ಅಧಿಕೃತ ದಾಖಲೆಗಳನ್ನು ಪಡೆದುಕೊಂಡು, ಅವುಗಳನ್ನು ಪರಿಶೀಲಿಸಿ ಕಾನೂನು ಬದ್ಧವಾಗಿ ವಾರಸುದಾರರಿಗೆ ಬಿಡುಗಡೆ ಮಾಡಲಾಗುತ್ತದೆ.

2021-22 ನೇ ಸಾಲಿನಲ್ಲಿ ಮಡಿಕೇರಿ ವಿಭಾಗ ವ್ಯಾಪ್ತಿಯಲ್ಲಿ ಕಾಡಾನೆ ದಾಳಿಯಿಂದ ಉಂಟಾದ 02 ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ದಯಾತ್ಮಕ ಧನ ಪಾವತಿಸುವುದು ಬಾಕಿ ಇರುತ್ತದೆ.

ಅಲ್ಲದೇ, ಸರ್ಕಾರದ ಆದೇಶ ಸಂಖ್ಯೆ. ಅಪಜೀ 61 ಎಫ್‌ಎಪಿ 2018 ದಿನಾಂಕ:16-10-2018 ರಂತೆ ಮೃತರ ಕುಟುಂಬದ ವಾರಸುದಾರರಿಗೆ ಹಾಗೂ ಶಾಶ್ವತ ಅಂಗವಿಕಲತೆ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ 05 ವರ್ಷಗಳವರೆಗೆ ಪ್ರತಿ ತಿಂಗಳಿಗೆ ರೂ. 2,000/-ಗಳ ಮಾಸಾಶನವನ್ನು ಸಹ ನೀಡಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಅಪಜೀ-130-ಎಫ್ ಡಬ್ಲ್ಯುಎಲ್-2016, ದಿನಾಂಕ: 19/09/2016ರ ಪ್ರಕಾರ ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಶಾಶ್ವತ ಅಂಗವಿಕಲತೆ ಪ್ರಕರಣಗಳಿಗೆ ರೂ.5.00 ಲಕ್ಷಗಳನ್ನು, ಭಾಗಶಃ ಅಂಗವಿಕಲತೆ ಪ್ರಕರಣಗಳಿಗೆ ರೂ.2.50 ಲಕ್ಷಗಳನ್ನು ಹಾಗೂ ಗಾಯಗೊಂಡ ವ್ಯಕ್ತಿಗೆ ಗರಿಷ್ಠ ರೂ. 30,000/-ಗಳ ಪರಿಹಾರ ಧನವನ್ನು ಪಾವತಿಸಲಾಗುತ್ತಿದೆ.

ಮಾನವ ಗಾಯ / ಭಾಗಶಃ ಅಂಗವಿಕಲತೆ / ಶಾಶ್ವತ ಅಂಗವಿಕಲತೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಆದೇಶ ಸಂಖ್ಯೆ ಎಫ್‌ಇಇ 128 ಎಫ್‌ಡಬ್ಲ್ಯೂಎಲ್ 2013 ದಿನಾಂಕ: 15-09-2015 ರನ್ವಯ ದಯಾತ್ಮಕ ಧನದ ಜೊತೆಗೆ ವೈದ್ಯಕೀಯ ವೆಚ್ಚವನ್ನು ಸಿ.ಜಿ.ಹೆಚ್.ಎಸ್. ದರಗಳಿಗೆ ಮಿತಿಗೊಳಿಸಿ ಪಾವತಿಸಲಾಗುತ್ತದೆ.</td></tr>
<tr><td>ಈ)</td><td>ಪರಿಹಾರ ನೀಡದೇ ಬಾಕಿ ಉಳಿದಿರುವ ಕುಟುಂಬಗಳೆಷ್ಟು; ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಉಳಿದ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)</td></tr>
</table>

ಸಂಖ್ಯೆ: ಅಪಜೀ 22 ಎಫ್‌ಡಬ್ಲ್ಯೂಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು